ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/16/ಎಸಿಎಂ(2)/2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:29-06-2019.

-:: ಸುತ್ತೋಲೆ ::-

ವಿಷಯ: 2019-20ನೇ ಸಾಲಿನ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಸ್ವೀಕರಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/16/ಎಸಿಎಂ(2)/2019-20, ದಿ:15-06-2019.

-00000000-

2019-10ನೇ ಸಾಲಿನ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಾತಿ ಸಂಬಂಧ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು 29-06-2019 ಎಂದು ನಿಗಧಿಪಡಿಸಿ ಉಲ್ಲೇಖ(1)ರ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ತಾತ್ಕಾಲಿಕ ವೇಳಾಪಟ್ಟಿಯನ್ನು ಸಹ ಪ್ರಕಟಿಸಲಾಗಿತ್ತು.

ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಠಿಯ ಮೇರೆಗೆ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣರಾಗಿರುವ ಅಭ್ಯರ್ಥಿಗಳು ವೆಬ್‌ಸೈಟ್‌ನಿಂದ **ಅರ್ಜಿ ಪಡೆಯಲು, ಮೂಲ ದಾಖಲೆಗಳ ಪರಿಶೀಲನೆಯೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ದಿನಾಂಕ:06-07-2019ರ ಸಂಜೆ 5.30 ಗಂಟೆಯವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

2019-20ನೇ ಸಾಲಿನ ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ಪರಿಷ್ಕೃತ ವೇಳಾಪಟ್ಟಿಯನ್ನು ಈ ಸುತ್ತೋಲೆಯಲ್ಲಿ ಲಗತ್ತಿಸಲಾಗಿದೆ. ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಅಭ್ಯರ್ಥಿಗಳ ಮತ್ತು ಪಾಲಕರ ಗಮನಕ್ಕೆ ತರುವುದು.

ನಿರ್ದೇಶಕರು

ರಾಜ್ಯದ ಸರ್ಕಾರಿ / ಅನುದಾನಿತ - ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ

ಸದರಿ ಸುತ್ತೋಲೆಯನ್ನು ಹಾಗೂ ಪರಿಷ್ಕೃತ ವೇಳಾಪಟ್ಟಿಯನ್ನು ಸೂಚನ ಫಲಕದಲ್ಲಿ ಪ್ರಕಟಿಸಿ ಹಾಗೂ ಸ್ಥಳೀಯ ದಿನಪತ್ರಿಕೆಯಲ್ಲಿ ಜಾಹಿರಾತು ನೀಡಲ ಸೂಚಿಸಲಾಗಿದೆ.

ಪ್ರತಿ:

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶಕರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಡತಕ್ಕೆ

Scanned by CamScanner